# ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ಕೊಡಗು–ಮಡಿಕೇರಿ

## SC No. 49/2024

| | | | |
|---|---|---|---|
| ಸಾಕ್ಷಿದಾರರ ಹೆಸರು | : | **ಶ್ರೀ ನಿಖಿಲ್** | **PW** – 6 |
| ತಂದೆಯ ಹೆಸರು | : | **ಮಾದಪ್ಪ** | **CW** – 8 |
| ವಯಸ್ಸು | : | **28 ವರ್ಷ** | |
| ವೃತ್ತಿ | : | **ಸಿವಿಲ್ ಇಂಜಿನಿಯರ್** | |
| ವಾಸ | : | **ದೊಡ್ಡತೋಳೂರು ಗ್ರಾಮ, ಸೋಮವಾರಪೇಟೆ ತಾಲೂಕು** | |

**ಸಾಕ್ಷಿಯನ್ನು ದಿನಾಂಕ 27–03–2026 ರಂದು ಕರೆಯಿಸಿ ಪ್ರಮಾಣ ವಚನ ಭೋಧಿಸಲಾಯಿತು.**

**<u>ಮುಖ್ಯ ವಿಚಾರಣೆ: ಸರ್ಕಾರಿ ಅಭಿಯೋಜಕರಿಂದಃ</u>**

1. ನನಗೆ ಮೃತ ಪುನೀತ್ ಈತನ ಪರಿಚಯ ಇತ್ತು. ನಾನು ಮೃತ ಪುನೀತ್ ಈತನ ಶವವನ್ನು ಮಡಿಕೇರಿ ಜಿಲ್ಲಾ ಆಸ್ಪತ್ರೆಯ ಶವಾಗಾರದಲ್ಲಿ ನೋಡಿದ್ದೆನು. ಸದರಿ ಪುನೀತ್ ಈತನು ವಿಷ ಸೇವಿಸಿ ಮೃತ ಪಟ್ಟಿದ್ದನು. ನಾನು ಠಾಣೆಗೆ ಹೋದಾಗ ಪೊಲೀಸರು ಪಂಚನಾಮೆ ಮೇಲೆ ಸಹಿ ತೆಗೆದುಕೊಂಡಿರುತ್ತಾರೆ. ಪಂಚನಾಮೆ ಈಗಾಗಲೇ ನಿಪಿ–13 ಎಂದು ಗುರುತಿಸಲಾಗಿದ್ದು, ಅದರ ಮೇಲಿರುವ ಸಾಕ್ಷಿ ಸಹಿಯನ್ನು **ನಿಪಿ–13(ಬಿ)** ಎಂದು ಗುರುತಿಸಲಾಯಿತು. ಪೋಟೋಗಳನ್ನು ನಿಪಿ–2 ಮತ್ತು ನಿಪಿ–3 ಎಂದು ಈಗಾಗಲೇ ಗುರುತಿಸಲಾಗಿದೆ. ಪೊಟೋಗಳನ್ನು ಯಾವ ಕಾರಣಕ್ಕೆ ತೆಗೆದಿದ್ದಾರೆ ಎಂದು ನನಗೆ ಗೊತ್ತಿಲ್ಲ. ನನ್ನ ಸಮಕ್ಷಮ ಪುನೀತ್ ಈತನ ಶವದ ಪಂಚನಾಮೆ ಮಾಡಿರುವುದಿಲ್ಲ.

**(ಸರ್ಕಾರಿ ಅಭಿಯೋಜಕರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು, ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ನೀಡಲಾಯಿತು)**

**ಪಾಟೀ ಸವಾಲು– ಸರ್ಕಾರಿ ಅಭಿಯೋಜಕರಿಂದಃ**

1. ದಿನಾಂಕ 10.10.2023 ರಂದು ಸಮಯ ಮಧ್ಯಾಹ್ನ 3.00 ರಿಂದ 6.00 ಗಂಟೆವರೆಗೆ ಪೊಲೀಸರು ಮಡಿಕೇರಿ ಜಿಲ್ಲಾ ಆಸ್ಪತ್ರೆಯ ಶವಾಗಾರದಲ್ಲಿ ಮೃತ ಪುನೀತ್ ಈತನ ಶವಪಂಚನಾಮೆಯನ್ನು ನಿಪಿ–13 ರಂತೆ ನನ್ನ ಸಮಕ್ಷಮ ಮಾಡಿದರು ಎಂದು ಸೂಚಿಸುವುದು ಸರಿಯಲ್ಲ. ಆ ಸಮಯದಲ್ಲಿ ನಿಪಿ–2 ಮತ್ತು ನಿಪಿ–3 ಪೊಟೋ ತೆಗೆದಿದ್ದಾರೆ ಎಂದು ಸೂಚಿಸುವುದು ಸರಿಯಲ್ಲ. ನಾನು ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲು– 1 ರಿಂದ 3 ನೇ ಆರೋಪಿತರ ಪರ ವಕೀಲರಾದ ಶ್ರೀ ಕೆ.ಎ.ಕೆ.ಆರ್, ರವರಿಂದಃ**

ಆರೋಪಿತರ ಪರ ವಕೀಲರು ಪಾಟೀ ಸವಾಲು ಇಲ್ಲ ಎಂದು ಹೇಳಿದ್ದರಿಂದ ಇಲ್ಲ ಎಂದು ತೆಗೆದುಕೊಳ್ಳಲಾಯಿತು.

**ಮರು ವಿಚಾರಣೆಃ** ಇಲ್ಲ.

(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು)

ಓ. ಹೇ. ಕೇ. ಸರಿ ಇದೆ.

ಸಹಿ/–

ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಕೊಡಗು–ಮಡಿಕೇರಿ.